# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ ರಾಜ್ಯದ ವಿವಿಧ ಜಿಲ್ಲಾ ಪಂಚಾಯತಿಗಳ ವ್ಯಾಪ್ತಿಯ ಸಾಮಾಜಿಕ ಅರಣ್ಯ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಯುವಸಬಲೀಕರಣ & ಕ್ರೀಡಾ ಇಲಾಖೆಯಲ್ಲಿ ತೆರವಾಗಿದ್ದ ಅಧಿಕಾರಿ/ಸಿಬ್ಬಂದಿಯವರ ಹುದ್ದೆಗಳು ಭರ್ತಿಯಾದ್ದರಿಂದ ವೇತನ/ಸಂಭಾವನೆ ವೆಚ್ಚಕ್ಕಾಗಿ ಹೆಚ್ಚುವರಿ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

ಆರ್ಥಿಕ ಇಲಾಖೆ ವೆಚ್ಚ 5 ಮತ್ತು 7 ಶಾಖೆಗಳಿಂದ ಸ್ವೀಕೃತವಾಗಿರುವ ಇ-ಆಫೀಸ್ ಕಡತಗಳು

**ಪ್ರಸ್ತಾವನೆ:**

ರಾಜ್ಯದ ವಿವಿಧ ಜಿಲ್ಲಾ ಪಂಚಾಯತಿಗಳ ವ್ಯಾಪ್ತಿಯ ಸಾಮಾಜಿಕ ಅರಣ್ಯ, ಆರೋಗ್ಯ & ಕುಟುಂಬ ಕಲ್ಯಾಣ ಹಾಗೂ ಯುವಸಬಲೀಕರಣ & ಕ್ರೀಡಾ ಇಲಾಖೆಯಲ್ಲಿ ತೆರವಾಗಿದ್ದ ಹುದ್ದೆಗಳು ಭರ್ತಿಯಾದ್ದರಿಂದ ವೇತನ ವೆಚ್ಚಕ್ಕಾಗಿ ಹಾಗೂ ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಯವರ ಸಂಭಾವನೆಗಾಗಿ ಪ್ರಧಾನ ಲೆಕ್ಕ ಶೀರ್ಷಿಕೆ 2406, 2210 ಮತ್ತು 22055ರಡಿ ಒಟ್ಟಾರೆ ರೂ.64.42ಲಕ್ಷಗಳನ್ನು ಹೆಚ್ಚುವರಿಯಾಗಿ ಒದಗಿಸಲು ಪ್ರಸ್ತಾವಿಸಿದೆ. ಪ್ರಸ್ತಾವನೆಯನ್ನು ಪರಿಶೀಲಿಸಿ ಲೆಕ್ಕ ಶೀರ್ಷಿಕೆ 2515-00-196-1-05-300ರಡಿ ಅನುಕ್ರಮವಾಗಿ ಒಟ್ಟು ರೂ.64.42ಲಕ್ಷಗಳನ್ನು ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಇ 69 ವೆಚ್ಚ 6/2020(ಇ-ಆಫೀಸ್) ದಿನಾಂಕ:20ನೇ ಫೆಬ್ರುವರಿ 2020**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಕೆಳಕಂಡ ಅನುಬಂಧದ ಕಾಲಂ 3ರ ಜಿಲ್ಲಾ ಪಂಚಾಯತಿಗಳಿಗೆ ಕಾಲಂ 4 ಕಾರ್ಯಕ್ರಮದಡಿಯ ವೆಚ್ಚಕ್ಕಾಗಿ ಕಾಲಂ 5ರ ಲೆಕ್ಕ ಶೀರ್ಷಿಕೆಯಡಿ ಒಟ್ಟು ರೂ.64.42ಲಕ್ಷ (ರೂಪಾಯಿ ಅರವತ್ನಾಲ್ಕು ಲಕ್ಷದ ನಲವತ್ತೆರಡು ಸಾವಿರಗಳು ಮಾತ್ರ)ಗಳನ್ನು ಬಿಡುಗಡೆಗೊಳಿಸಿದೆ.

(ರೂ.ಲಕ್ಷಗಳಲ್ಲಿ)

| ಕ್ರ.ಸಂ. | ಇ-ಆಫೀಸ್ ಕಡತ ಸಂಖ್ಯೆ | ಜಿಲ್ಲಾ ಪಂಚಾಯತಿ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | 2515-00-196-1-05-300ರಿಂದ ಬಿಡುಗಡೆಗೊಳಿಸಿದ ಅನುದಾನ | ಒಟ್ಟು |
|---|---|---|---|---|---|
| 1 | 2 | 3 | 4 | 5 | 6 |
| 1 | ಆಇ 351 ವೆ5/2019 | ಧಾರವಾಡ | 2406-00-101-0-26-001 | 6.74 | 6.74 |
| 2 | ಆಇ 55 ವೆ5/2020 | ಕೋಲಾರ | 2210-00-101-0-29-090 | 10.96 | 10.96 |
| 3 | ಆಇ 117 ವೆ5/2020 | ಚಿಕ್ಕಮಗಳೂರು | 2406-00-101-0-26-001 | 44.92 | 44.92 |
| 4 | ಆಇ 40 ವೆ7/2020 | ರಾಮನಗರ | 2205-00-104-0-27-001 | 1.80 | 1.80 |
| | ಒಟ್ಟು | | 1414003290 → | 64.42 | 64.42 |

(ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ-2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ಜಿಲ್ಲಾ ಪಂಚಾಯತಿಯ ಮುಖ್ಯ ಲೆಕ್ಕಾಧಿಕಾರಿಗಳು ತಾಲ್ಲೂಕು ಪಂಚಾಯತಿಯ ಕಾರ್ಯ ನಿರ್ವಾಹಕ ಅಧಿಕಾರಿಗಳು ಮರು ಹೊಂದಾಣಿಕೆ ಪ್ರಸ್ತಾವನೆಯನ್ನು ಈ ಕೆಳಗಿನ ಅಧಿಕಾರಿಗಳಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಆರ್ಥಿಕ ಇಲಾಖೆಗೆ ಸಲ್ಲಿಸಿ ಖಜಾನೆಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು.)

ಬಿಡುಗಡೆಗೊಳಿಸಿರುವ ಈ ಅನುದಾನವನ್ನು ವೇತನ ವೆಚ್ಚಕ್ಕಾಗಿ ವೆಚ್ಚ ಮಾಡಲು ಅನುಷ್ಠಾನಾಧಿಕಾರಿಗಳು ಆದ್ಯತೆಯ ಮೇಲೆ ಕ್ರಮವಹಿಸತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ಜಿಲ್ಲಾ ಪಂಚಾಯತಿ ಅಥವಾ ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

**(ಪುರುಷೋತ್ತಮ್ ಸಿಂಗ್ ಬಿ.ಹೆಚ್.)**
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ

1. ಮಹಾಲೇಖಪಾಲರು(ಎ&ಇ), ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ-2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು-2ರವರಿಗೆ
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಅರಣ್ಯ/ಆರೋಗ್ಯ ಮತ್ತು ಕುಟುಂಬ ಕಲ್ಯಾಣ/ಯುವಸಬಲೀಕರಣ & ಕ್ರೀಡಾ ಇಲಾಖೆ
4. ಸಂಬಂಧಿಸಿದ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು,
5. ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
6. ಸಂಬಂಧಿಸಿದ ಜಿಲ್ಲಾ ಖಜಾನಾಧಿಕಾರಿಗಳು,
7. ರಕ್ಷಾ ಕಡತಕ್ಕೆ/ ಹೆಚ್ಚುವರಿ ಪ್ರತಿ